ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	136
ಮಾನ್ಯ ಸದಸ್ಯರ ಹೆಸರು	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
ಉತ್ತರಿಸುವ ಸಚಿವರು	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ	21-09-2020

	ಪ್ರಶ್ನೆ	ಉತ್ತರ
(ಅ)	ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ 371(ಜೆ) ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ;	ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06-07-2020ರನ್ವಯ ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ವನ್ನೊಳಗೊಂಡಂತೆ ಉನ್ನತ ಶಿಕ್ಷಣ ಇಲಾಖೆಯ ಆಡಳಿತ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.
(ಆ)	ಕಲ್ಯಾಣ ಕರ್ನಾಟಕದಡಿ (ಹೈಕ) ಮೀಸಲಿಡಲಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;	
(ಇ)	ವಿಶ್ವವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದ ಶಿಕ್ಷಣದ ಗುಣಮಟ್ಟದ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
(ಈ)	ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು? (ಮಾಹಿತಿ ಒದಗಿಸುವುದು)	ಅನ್ವಯಿಸುವುದಿಲ್ಲ.

ಸಂಖ್ಯೆ: ಇಡಿ 12 ಯುಆರ್‌ಇ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)